# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** : ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಆನ್ ಲೈನ್ ಮುಖಾಂತರ ಕೋರ್ಸ್‌ಗಳಿಗೆ ಸಂಯೋಜನೆಯನ್ನು ನೀಡುವಾಗ ವಿದ್ಯಾರ್ಥಿ ಪ್ರಮಾಣಕ್ಕಿಂತ (Intake) ಹೆಚ್ಚುವರಿಯಾಗಿ ಶೇ.20% ವಿದ್ಯಾರ್ಥಿಗಳನ್ನು ತೆಗೆದುಕೊಳ್ಳುವ ಬಗ್ಗೆ.

**ಓದಲಾಗಿದೆ** :

1. ಆದೇಶ ಸಂಖ್ಯೆ: ಇಡಿ 34 ಇಜಿಬಿವಿ 2020 (ಭಾಗ-2), ದಿನಾಂಕ: 10.06.2021.
2. ಆದೇಶ ಸಂಖ್ಯೆ ಇಡಿ 260 ಯುಎನ್‌ಇ 2019 (ಭಾಗ-1), ದಿನಾಂಕ 07.08.2021.
3. ರಾಜ್ಯ ಉನ್ನತ ಶಿಕ್ಷಣ ಪರಿಷತ್ ಪತ್ರ ಸಂಖ್ಯೆ: ಕರಾಉಶಿಪ: ವಿಸಿಪಿ/ 9/ 2021-22, ದಿನಾಂಕ: 04.09.2021.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ದಿನಾಂಕ: 10.06.2021 ರ ಆದೇಶದಲ್ಲಿ ವಿಶ್ವವಿದ್ಯಾಲಯಗಳು ಸಂಯೋಜನ ಪ್ರಕ್ರಿಯೆ ಹಾಗೂ ಮುಂತಾದ ಕಾರ್ಯ ಚಟುವಟಿಕೆಗಳಿಗೆ ಅನುಮೋದನೆ ನೀಡುವುದು ಸೇರಿದಂತೆ, ಮುಂಬರುವ ಶೈಕ್ಷಣಿಕ ವರ್ಷಗಳಲ್ಲಿ ಕಡ್ಡಾಯವಾಗಿ ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ) ಮುಖಾಂತರ ಉನ್ನತೀಕರಿಸಿ, ಉನ್ನತ ಶಿಕ್ಷಣ ಇಲಾಖೆಯು ನಿರ್ವಹಣೆ ಮಾಡುತ್ತಿರುವ, ಆನ್ ಲೈನ್ ಸಂಯೋಜನಾ ತಂತ್ರಾಂಶದ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಿ, ವಿಶ್ವವಿದ್ಯಾಲಯಗಳು ಸ್ಥಳೀಯ ವಿಚಾರಣಾ ಸಮಿತಿಯ ವರದಿಗಳೊಂದಿಗೆ, ಶಿಫಾರಸ್ಸುಗಳನ್ನು ಆನ್‌ಲೈನ್ ತಂತ್ರಾಂಶದ ಮುಖಾಂತರವೇ ಸರ್ಕಾರಕ್ಕೆ ಅನುಮೋದನೆಗೆ ಸಲ್ಲಿಸುವಂತೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ದಿನಾಂಕ: 07.08.2021 ರ ಆದೇಶದಲ್ಲಿ, ಭಾರತ ಸರ್ಕಾರವು ಪ್ರಕಟಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರಾಜ್ಯದ ಉನ್ನತ ಶಿಕ್ಷಣ ಇಲಾಖೆಯಡಿಯ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಲ್ಲಿ 2021-22 ನೇ ಶೈಕ್ಷಣಿಕ ವರ್ಷದಿಂದ ಅನುಷ್ಠಾನಗೊಳಿಸುವಂತೆ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ದಿನಾಂಕ: 04.09.2021 ಪತ್ರದಲ್ಲಿ, ರಾಜ್ಯದಲ್ಲಿ ಅನುಷ್ಠಾನಗೊಳಿಸುತ್ತಿರುವ ರಾಷ್ಟ್ರೀಯ ಶಿಕ್ಷಣ ನೀತಿ – 2020 ರ ಪ್ರಕಾರ, ವಿದ್ಯಾರ್ಥಿಗಳು ವಿಷಯಾಧಾರಿತ ಪ್ರೋಗ್ರಾಮ್ (Bcom, BBA, BBM, BHM, BCA) ಗಳನ್ನು ಹೊರತುಪಡಿಸಿ, ಬಿ.ಎ. ಮತ್ತು ಬಿ.ಎಸ್ಸಿ ಸ್ನಾತಕ ಪದವಿಗಳಿಗೆ, ಈ ಮೊದಲಿದ್ದ ಕಾಂಬಿನೇಷನ್ ಬದಲಾಗಿ ಎರಡು ವಿಷಯಗಳನ್ನು (Disciplines or Core subjects) ಮತ್ತು ಒಂದು Open Elective ಗಳನ್ನು ಆಯ್ಕೆ ಮಾಡಿಕೊಳ್ಳಬೇಕಾಗಿರುತ್ತದೆ. ಹೀಗೆ ಆಯ್ಕೆ ಮಾಡಿಕೊಳ್ಳುವ ಸಂದರ್ಭದಲ್ಲಿ Combination ಗಳ ಬದಲಾಗಿ ಎರಡು ವಿಷಯಗಳನ್ನು ಆಯ್ಕೆ ಮಾಡಿಕೊಳ್ಳುತ್ತಿರುವುದರಿಂದ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತದೆ ಮತ್ತು ವಿಷಯವಾರು ಕಾರ್ಯಭಾರದಲ್ಲಿಯೂ ಸಹ ವ್ಯತ್ಯಾಸವಾಗುವುದೆಂದು ಕಂಡುಬಂದಿದೆ.

ಇದನ್ನು ಸರಿದೂಗಿಸಲು ಈಗ ನೀಡಿರುವ ಕಾಂಬಿನೇಷನ್ ಇನ್‌ಟೇಕ್ ಅನ್ನು, ಕಾಲೇಜುಗಳಲ್ಲಿ ಒಟ್ಟಾರೆ ವಿದ್ಯಾರ್ಥಿಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗದಂತೆ ಪ್ರಸಕ್ತ 2021-22 ಕ್ಕೆ ಪ್ರವೇಶಾತಿಯು ಒಳಗೊಂಡಂತೆ, ಮುಂಬರುವ ವರ್ಷಗಳಲ್ಲಿ ವಿಶ್ವವಿದ್ಯಾಲಯಗಳಿಂದ ಸಂಯೋಜನೆಯನ್ನು ನೀಡುವಾಗ ವಿಷಯವಾರು ಇನ್‌ಟೇಕ್‌ಗೆ ಸಂಯೋಜನೆ ನೀಡುವಂತೆ ಆದೇಶ

-2...

ಹೊರಡಿಸಲು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಕೋರಿರುತ್ತಾರೆ. ಈ ಹಿನ್ನೆಲೆಯಲ್ಲಿ, ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 227 ಯುಎನ್ಇ 2021,**
**ಬೆಂಗಳೂರು, ದಿನಾಂಕ:16.09.2021**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ವ್ಯಾಪ್ತಿಯಲ್ಲಿ ಬರುವ ಸಂಯೋಜಿತ ಕಾಲೇಜುಗಳಿಗೆ, 2021-22 ನೇ ಶೈಕ್ಷಣಿಕ ಸಾಲಿಗೆ ಸೀಮಿತವಾಗಿ ಪ್ರಸ್ತುತ ಕೋರ್ಸ್/ಕಾಂಬಿನೇಷನ್‌ವಾರು ಅನುಮೋದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ (Intake) ಹೆಚ್ಚುವರಿಯಾಗಿ 20% ವಿದ್ಯಾರ್ಥಿಗಳನ್ನು ಅನುಮೋದಿಸಲು ವಿಶ್ವವಿದ್ಯಾಲಯಗಳಿಗೆ ಕೆಳಗಿನ ನಿಬಂಧನೆಗಳಿಗೆ ಒಳಪಟ್ಟು ಅನುಮತಿಸಲಾಗಿದೆ.

1. ಬಿ.ಎ / ಬಿ.ಎಸ್‌ಸಿ ಕೋರ್ಸ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಕಾಂಬಿನೇಷನ್‌ಗಳ ಬದಲಾಗಿ ವಿಷಯಗಳನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶವಿರುವುದರಿಂದ, ಈ ಕೋರ್ಸ್‌ಗಳಿಗೆ ಸಂಬಂಧಪಟ್ಟ ಹಾಗೆ ಪ್ರತಿ ಸಂಯೋಜಿತ ಕಾಲೇಜಿನ ಅನುಮೋದಿತ ಕಾಂಬಿನೇಷನ್‌ಗಳಲ್ಲಿನ ಪ್ರತಿ ವಿಷಯದ ಒಟ್ಟು ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಕ್ರಮ ಕೈಗೊಳ್ಳುವುದು.
2. Open Elective ಗೆ ಸಂಬಂಧಪಟ್ಟ ಹಾಗೆ, ಪ್ರತಿ ಸಂಯೋಜಿತ ಕಾಲೇಜಿನ, ಒಟ್ಟು ಅನುಮೋದಿತ ಕೋರ್ಸ್ – ಕಾಂಬಿನೇಷನ್ ಗಳಲ್ಲಿನ ಪ್ರತಿ ವಿಷಯದ ವಿದ್ಯಾರ್ಥಿ ಪ್ರಮಾಣ (Intake) ಪ್ರಸ್ತುತ ಅನುಮೋದಿತ ವಿದ್ಯಾರ್ಥಿ ಪ್ರಮಾಣದ 50% ಮೀರದಂತೆ ಕ್ರಮ ವಹಿಸುವುದು.
3. Open Elective ಗೆ ಸಂಬಂಧಪಟ್ಟ ಹಾಗೆ ಮೇಲೆ ತಿಳಿಸಲಾದ ಪ್ರತಿ ವಿಷಯದ ಶೇಕಡವಾರು ವಿದ್ಯಾರ್ಥಿ ಪ್ರಮಾಣವನ್ನು ವಿಶ್ವವಿದ್ಯಾಲಯಗಳು ತಮ್ಮ ಹಂತದಲ್ಲಿ ಅವಶ್ಯಕತೆ ಅನುಗುಣವಾಗಿ ಮಾರ್ಪಡಿಸಿಕೊಳ್ಳಬಹುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಶೀತಲ್ ಎಂ. ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ
(ವಿಶ್ವವಿದ್ಯಾಲಯಗಳು-1),
ಉನ್ನತ ಶಿಕ್ಷಣ ಇಲಾಖೆ

**ಪ್ರತಿಯನ್ನು:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
3. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು.
4. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
5. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.

-3..

6. ಮಾನ್ಯ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
7. ಕುಲಸಚಿವರುಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು.
8. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ.
10. ಸರ್ಕಾರದ ಜಂಟಿ ಕಾರ್ಯದರ್ಶಿಗಳು (ವಿಶ್ವವಿದ್ಯಾಲಯಗಳು), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಗಳು (ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿಗಳು (ಯೋಜನೆ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
13. ವಿಶೇಷಾಧಿಕಾರಿಗಳು, ಇ-ಆಡಳಿತ ಘಟಕ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
14. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.